# ಕರ್ನಾಟಕ ಸರ್ಕಾರ

**ಆಯುಕ್ತರ ಕಚೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೇಂದ್ರೀಕೃತ ದಾಖಲಾತಿ ಘಟಕ, ಕೆ.ಜಿ ರಸ್ತೆ, ಬೆಂಗಳೂರು-09**

**Phone: 22228805, 22483140, 22483145** **e-mail :- cackarnataka@gmail.com**

ಸಂ. ಸಿಎಸಿ-04/ಬಿ.ಇಡಿ.ದಾ/01/2020-21 ದಿನಾಂಕ:05-02-2021

## ಪ್ರಕಟಣೆ

2020-21ನೇ ಸಾಲಿಗೆ ಎರಡು ವರ್ಷದ ಬಿ.ಇಡಿ ಕೋರ್ಸಿನ ವ್ಯಾಸಂಗಕ್ಕಾಗಿ ರಾಜ್ಯದ ಸರ್ಕಾರಿ, ಮಾನ್ಯತೆ ಪಡೆದ ಅನುದಾನಿತ ಹಾಗೂ ಅನುದಾನರಹಿತ ಬಿ.ಇಡಿ ಕಾಲೇಜುಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳ ದಾಖಲಾತಿಗಾಗಿ ಆನ್‌ಲೈನ್ ಮೂಲಕ ಸ್ವೀಕರಿಸಲಾದ ಅರ್ಜಿಗಳನ್ನು ಪರಿಶೀಲಿಸಿ, **ಮೂಲದಾಖಲೆಗಳ ಪರಿಶೀಲನೆಗೆ ಹಾಜರಾಗಬೇಕಾದ ಅಭ್ಯರ್ಥಿಗಳ ಪಟ್ಟಿಯನ್ನು ದಿನಾಂಕ:05-02-2021ರಂದು ವೆಬ್‌ಸೈಟ್ www.schooleducation.kar.nic.in ನಲ್ಲಿ ಪ್ರಕಟಿಸಿದೆ.** ಸದರಿ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ಪರಿಶೀಲನಾ ಕೇಂದ್ರಗಳಲ್ಲಿ (CTE/DIET) ತಮ್ಮ ಮೂಲದಾಖಲೆಗಳ ಪರಿಶೀಲನೆಗೆ ಹಾಜರಾಗಲು ದಿನಾಂಕ:06/02/2021 ರಿಂದ 16/02/2021 ರವರೆಗೆ ನಿಗದಿಪಡಿಸಲಾಗಿದೆ.

**ಅಭ್ಯರ್ಥಿಗಳಿಗೆ ಸೂಚನೆಗಳು**

- ಪಟ್ಟಿಯಲ್ಲಿ ಅಭ್ಯರ್ಥಿಗಳ ಹೆಸರು, ಮೂಲದಾಖಲೆಗಳ ಪರಿಶೀಲನೆಗಾಗಿ ಹಾಜರಾಗಬೇಕಾದ ದಿನಾಂಕ, ಸಮಯ ಹಾಗೂ ಸ್ಥಳದ ವಿವರಗಳನ್ನು ನೀಡಲಾಗಿದೆ.
- ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಿದ ಮಾಹಿತಿಯಂತೆ ತಮ್ಮ ಮೂಲ ದಾಖಲೆಗಳೊಂದಿಗೆ ತಮಗೆ ಹಂಚಿಕೆಯಾದ ಪರಿಶೀಲನಾ ಕೇಂದ್ರ(Verification Center)ದಲ್ಲಿ ನಿಗದಿತ ದಿನಾಂಕ ಹಾಗೂ ಸಮಯಕ್ಕೆ ತಪ್ಪದೇ ಹಾಜರಾಗುವುದು.
- ನಿಗದಿತ ದಿನಾಂಕದೊಳಗೆ ಹಾಜರಾಗದಿದ್ದಲ್ಲಿ ಅಂತಹ ಅಭ್ಯರ್ಥಿಯನ್ನು ದಾಖಲಾತಿಯ ಮುಂದಿನ ಹಂತದ ಪ್ರಕ್ರಿಯೆಗೆ ಪರಿಗಣಿಸಲಾಗುವುದಿಲ್ಲ. ಇದಕ್ಕೆ ಅಭ್ಯರ್ಥಿಗಳೇ ನೇರ ಹೊಣೆಗಾರರಾಗಿರುತ್ತಾರೆ.
- ಕೋವಿಡ್-19 ರ ಹಿನ್ನೆಲೆ ಎಲ್ಲಾ ಅಭ್ಯರ್ಥಿಗಳು ದಾಖಲೆಗಳ ಪರಿಶೀಲನೆಗೆ ಹಾಜರಾಗುವ ಸಂದರ್ಭದಲ್ಲಿ ಕಡ್ಡಾಯವಾಗಿ ಮುಖಗವಸು ಧರಿಸಿರಬೇಕು.
- ಕೋವಿಡ್-1ರ ಹಿನ್ನೆಲೆಯಲ್ಲಿ ಕುಡಿಯುವ ನೀರಿನ ಬಾಟಲ್‌ಗಳನ್ನು ತಪ್ಪದೇ ತಮ್ಮೊಂದಿಗೆ ಒಯ್ಯುವುದು.

ಸಹಿ/-

ವಿಶೇಷಾಧಿಕಾರಿ